# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮

ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪   ಫ್ಯಾಕ್ಸ್ : ೨೬೫೨೩೮೬೭

http://www.kasapa.in   e-mail : kannadaparishattu@gmail.com


---

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ** / ೨೦೨೨–೨೩     ದಿನಾಂಕ : ೨೧–೦೭–೨೦೨೨

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

...................................................ಬೆಂಗಳೂರು

ಪತ್ರಿಕಾ/ ಟಿ.ವಿ. ವರದಿ

## <u>ಕನ್ನಡ ಶಾಲೆ ಉಳಿವಿಗೆ ಕನ್ನಡ ಸಾಹಿತ್ಯ ಪರಿಷತ್ ಹೋರಾಟಕ್ಕೂ ಸಿದ್ಧ</u>

## ಮಾದರಿ ಶಾಲೆ ನೆಪವೊಡ್ಡಿ ಕನ್ನಡ ಶಾಲೆ ಮುಚ್ಚಬೇಡಿ: ನಾಡೋಜ ಡಾ. ಮಹೇಶ ಜೋಶಿ

**ಬೆಂಗಳೂರು:** ಕನ್ನಡ ಶಾಲೆಗಳು ಉಳಿದರೆ ಮಾತ್ರ ನಾಡಿನಲ್ಲಿ ಕನ್ನಡ ಉಳಿಯಲು ಸಾಧ್ಯ. ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು **"ಕನ್ನಡ ಶಾಲೆಗಳನ್ನು ಉಳಿಸಿ- ಕನ್ನಡವನ್ನು ಬೆಳೆಸಿ"** ಎನ್ನುವ ಧ್ಯೇಯದೊಂದಿಗೆ ಕನ್ನಡಶಾಲೆಗಳನ್ನು ಉಳಿಸಿಕೊಳ್ಳುವುದಕ್ಕೆ ಹೋರಾಟ ನಡೆಸುತ್ತಿದೆ. ಈ ಮಧ್ಯೆ ಸರಕಾರ ಮಾದರಿ ಶಾಲೆಗಳ ಹೆಸರಿನಲ್ಲಿ ಇದ್ದ ಕನ್ನಡ ಮಾಧ್ಯಮ ಶಾಲೆಗಳ ವಿಲೀನಿಕರಣಕ್ಕೆ ಮುಂದಾದರೆ ಇದು ಕನ್ನಡಕ್ಕೆ ಮಾಡುವ ಘೋರ ಅನ್ಯಾಯ ಹಾಗೂ ಕನ್ನಡದ ಅಸ್ಮಿತೆಗೆ ಧಕ್ಕೆ ತರುವ ಕಾರ್ಯ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಕಳವಳ ವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು **"ಕನ್ನಡ ಶಾಲೆ ಉಳಿಸಿ- ಕನ್ನಡ ಬೆಳೆಸಿ"** ಎನ್ನುವ ಧ್ಯೇಯವಾಕ್ಯದೊಂದಿಗೆ ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವುದಕ್ಕಾಗಿ **ಹಿರಿಯ ಸಾಹಿತಿ ನಾಡೋಜ ಡಾ. ಎಸ್.ಎಲ್. ಭೈರಪ್ಪ** ಅವರ ಅಧ್ಯಕ್ಷತೆಯಲ್ಲಿ ದುಂಡುಮೇಜಿನ ಸಭೆ ಇತ್ತೀಚೆಗೆ ಆಯೋಜಿಸಲಾಗಿತ್ತು. ಆ ಸಭೆಗೆ ಸ್ವತಃ ರಾಜ್ಯದ **ಶಿಕ್ಷಣ ಸಚಿವರಾದ ಬಿ.ಸಿ. ನಾಗೇಶ್** ಸೇರಿದಂತೆ ಮಠಾಧೀಶರು, ನಾಡಿನ ಪ್ರಮುಖ ಶಿಕ್ಷಣ ತಜ್ಞರು, ಹಿರಿಯ ಸಾಹಿತಿಗಳು ಭಾಗವಹಿಸಿದ್ದರು. ಆ ದುಂಡುಮೇಜಿನ ಸಭೆಯಲ್ಲಿ ಯಾವುದೇ ಕನ್ನಡ ಶಾಲೆಯನ್ನು ಮುಚ್ಚಬಾರದು ಹಾಗೂ ವಿಲೀನಿಕರಣಮಾಡಬಾರದು ಎನ್ನುವ ಸ್ಪಷ್ಟ ನಿರ್ಧಾರವನ್ನು ಕನ್ನಡ ಸಾಹಿತ್ಯ ಪರಿಷತ್ತು ಕೈಗೊಂಡಿತ್ತು. ರಾಜ್ಯದಲ್ಲಿ ಕನ್ನಡ ಉಳಿಸಿಕೊಳ್ಳುವ ಕಾರ್ಯ ಆಗಬೇಕಿದೆ ಮತ್ತು ಕಡ್ಡಾಯವಾಗಿ ಕನ್ನಡ ಶಾಲೆಗಳನ್ನು ಉಳಿಸಿಕೊಳ್ಳಬೇಕಿದೆ. ಕನ್ನಡ ಶಾಲೆಗಳಿಗೆ ಹೆಚ್ಚಿನ ಮಕ್ಕಳು ಸೇರ್ಪಡೆಯಾಗುವ ವಾತಾವರಣ ನಿರ್ಮಾಣ ಮಾಡಬೇಕಿದೆ. ಇದರ ಹೊರತಾಗಿ ಕನ್ನಡ ಶಾಲೆಗಳಲ್ಲಿ ಮಕ್ಕಳಿಲ್ಲ ಎನ್ನುವ ಕಾರಣ ನೀಡಿ ಶಾಲೆಗಳ ವಿಲೀನ ಕ್ರಮ ಸರಿಯಲ್ಲ ಎಂದು **ನಾಡೋಜ ಡಾ.ಮಹೇಶ ಜೋಶಿ** ತಿಳಿಸಿದ್ದಾರೆ.

ಪ್ರತಿ ಹೋಬಳಿಗೊಂದು "**ಮಾದರಿ ಶಾಲೆ**"ಗಳನ್ನು ರೂಪಿಸಬೇಕೆಂಬ ಸರಕಾರದ ಉದ್ದೇಶ ಸ್ವಾಗತಾರ್ಹವಾದುದೇ. ಆದರೆ, ಅಕ್ಕಪಕ್ಕದಲ್ಲಿ ಇರುವ ಕನ್ನಡಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ತೀರಾ ಕಡಿಮೆ ಎಂಬ ನೆಪ ನೀಡಿ ಕನ್ನಡ ಶಾಲೆಗಳನ್ನು ಮಾದರಿ ಶಾಲೆಗಳಲ್ಲಿ ವಿಲೀನಗೊಳಿಸಲಾಗುತ್ತಿದೆ ಎನ್ನುವ ವರದಿಗಳು ಬಿತ್ತರವಾಗುತ್ತಿವೆ. ಕನ್ನಡಶಾಲೆಗಳಿಗೆ ಮಕ್ಕಳ ಸಂಖ್ಯೆ ಕಡಿಮೆಯಾಗಲು ಮೂಲ ಕಾರಣ ಅರಿತು, ಅದಕ್ಕೆ ಪರಿಹಾರ ಕಾಣುವುದರಲ್ಲಿ ಅರ್ಥವಿದೆ. ಅದನ್ನು ಹೊರತುಪಡಿಸಿ ಗ್ರಾಮೀಣ ಪ್ರದೇಶಗಳಲ್ಲಿ ವಾಹನ ಸೌಲಭ್ಯ ನೀಡುವ ಮೂಲಕ ಮಕ್ಕಳನ್ನು ಮಾದರಿ ಶಾಲೆಗೆ ಕರೆದು ತರಲಾಗುವುದು ಎನ್ನುವ ಬಗ್ಗೆಯೂ ವರದಿಯಾಗುತ್ತಿದೆ. ರಾಜ್ಯದಲ್ಲಿನ ೪೮ ಸಾವಿರ ಶಾಲೆಗಳ ಪೈಕಿ ೧೩,೮೦೦ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ತೀರಾ ಕಡಿಮೆಯಾಗಿದೆ ಎನ್ನುವ ಉದ್ದೇಶ ಇಟ್ಟು ಶಾಲೆಗಳನ್ನು ವಿಲೀನ ಮಾಡಬಾರದು.

ನಮ್ಮ ರಾಜ್ಯದಲ್ಲಿನ ಭೌಗೋಳಿಕ ಪರಿಸ್ಥಿತಿಯನ್ನು ಅರ್ಥಮಾಡಿಕೊಳ್ಳದೆ ಕೆಲವು ಯೋಜನೆಗಳನ್ನು ಸರಕಾರದ ಅಧಿಕಾರಿಗಳ ಮಟ್ಟದಲ್ಲಿ ಮಾಡಿ, ಅದನ್ನು ಅನುಷ್ಠಾನಕ್ಕೆ ತರುವಲ್ಲಿ ತರಾತುರಿಯಲ್ಲಿ ಕಾರ್ಯನಿರ್ವಹಿಸುತ್ತಾರೆ. ಅದರ ಸಾಧಕ-ಬಾಧಕಗಳ ಕುರಿತು ಚಿಂತನೆ ನಡೆಸುವುದಿಲ್ಲ. ಯೋಜನೆಗಳನ್ನು ಸಿದ್ಧಪಡಿಸುವ ಮುನ್ನ ಶಿಕ್ಷಣ ತಜ್ಞರ, ಕನ್ನಡ ಸಾಹಿತ್ಯ ಪರಿಷತ್ತಿನ, ಕನ್ನಡ ಪರ ಹೊರಾಟಗಾರರ ಅಭಿಪ್ರಾಯ/ಸಲಹೆ/ಸೂಚನೆಗಳನ್ನು ಪಡೆಯಲಾಗುವುದಿಲ್ಲ. ಒಂದು ವೇಳೆ ಸರಕಾರ ಕನ್ನಡ ಸಾಹಿತ್ಯ ಪರಿಷತ್ತಿಗೆ ಈ ಜವಾಬ್ದಾರಿಯನ್ನು ನೀಡಿದರೆ ನಾವು ಎಲ್ಲರ ಅಭಿಪ್ರಾಯಗಳನ್ನು ಸಂಗ್ರಹಿಸಿ ಸರಕಾರಕ್ಕೆ ಸೂಕ್ತ ಮಾರ್ಗದರ್ಶನ ನೀಡುತ್ತಿದ್ದೆವು. ಆದರೆ ಶಿಕ್ಷಣ ಇಲಾಖೆಯ ಕ್ರಮವನ್ನು ಕನ್ನಡಿಗರಾದ ನಾವು ಸಹಿಸಲು ಸಾದ್ಯವಿಲ್ಲ. ಜೊತೆಗೆ ಕನ್ನಡ ಶಾಲೆಗಳ ವಿಲೀನಿಕರಣವನ್ನು ಕನ್ನಡ ನಾಡಿನ ಮತ್ತು ನುಡಿಯ ಕುರಿತು ಅಭಿಮಾನವಿರುವ ಯಾರೂ ಕೂಡ ಈ ರೀತಿಯ ಅವಸರದ ತೀರ್ಮಾನಕ್ಕೆ ಒಪ್ಪಿಗೆ ನೀಡುವುದಿಲ್ಲ.

ಕನ್ನಡದ ಶಾಲೆಗಳನ್ನು ಶಾಶ್ವತವಾಗಿ ಮುಚ್ಚುವ ಕೆಲಸ ಆಗಬಾರದು. ಅದರ ಬದಲಿಗೆ ಇರುವ ಕನ್ನಡ ಶಾಲೆಗಳಿಗೆ ಮಕ್ಕಳನ್ನು ಇನ್ನಷ್ಟು ಹೆಚ್ಚಾಗಿ ಆಕರ್ಷಿಸಬೇಕಾಗಿದೆ. ಕನ್ನಡ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದರೊಂದಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ನೀಡುವ ಯೋಜನೆ ಕಾರ್ಯಗತವಾಗಬೇಕಿದೆ. ಪಾಲಕರಲ್ಲಿ ಕನ್ನಡ ಶಾಲೆಗಳಲ್ಲಿ ಉತ್ತಮ ಶಿಕ್ಷಣ ನೀಡಲಾಗುವುದು ಎನ್ನುವ ಭರವಸೆ ನೀಡುವ ಕೆಲಸಗಳು ಸರಕಾರದ ಮಟ್ಟದಲ್ಲಿ ಆಗಬೇಕಿವೆ. ಅದನ್ನು ಹೊರತುಪಡಿಸಿ ಕನ್ನಡ ಶಾಲೆಗಳ ಬುಡಕ್ಕೆ ಕೊಡಲಿ ಏಟು ನೀಡುವ ಕಾರ್ಯ ನಿಲ್ಲಿಸಬೇಕಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಆಗ್ರಹಿಸುತ್ತದೆ ಎಂದು **ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

ರಾಜ್ಯದಲ್ಲಿ ೬ ಸಾವಿರ ಗ್ರಾಮ ಪಂಚಾಯಿತಿಗಳಿವೆ. ಪ್ರತಿ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲಿ ಮಾದರಿ ಶಾಲೆಗಳನ್ನು ನಿರ್ಮಿಸಲು ತಗಲುವ ಆರ್ಥಿಕ ವೆಚ್ಚಕ್ಕಿಂತ, ಈಗಿರುವ ಕನ್ನಡ ಶಾಲೆಗಳನ್ನು ಹಂತ ಹಂತವಾಗಿ ಉನ್ನತೀಕರಣ ಮಾಡುವ ಮೂಲಕ ಕನ್ನಡ ಶಾಲೆಗಳ ಅಭಿವೃದ್ಧಿ ಮಾಡುವ ಕೆಲಸ ಮಾಡಬೇಕಿದೆ. ಬದಲಾಗಿ ಕನ್ನಡ ಶಾಲೆಗಳನ್ನು ಮುಚ್ಚುವ ಕ್ರಮ ಸರಿಯಲ್ಲ.

ಅನಿವಾರ್ಯ ಪರಿಸ್ಥಿತಿ ಬಂದರೆ ಕನ್ನಡ ಶಾಲೆಗಳ ಉಳಿವಿಗಾಗಿ ಕನ್ನಡ ಸಾಹಿತ್ಯ ಪರಿಷತ್ತು ಹೋರಾಟದ ಮಾರ್ಗವನ್ನು ಕೈಗೆತ್ತಿಕೊಳ್ಳಲಿದೆ ಎಂದು ಕನ್ನಡ **ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ** ಎಚ್ಚರಿಸಿದ್ದಾರೆ.

ಶ್ರೀನಾಥ ಜೆ
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು